



ಅರುಣ ಪಿ. ಭಟ್ಟ

## ವಾರ ಭವಿಷ್ಯ 09.07.2020ರಿಂದ 15.07.2020ರವರೆಗೆ




ನಿಮ್ಮ ಬೌದ್ಧಿಕ ಶಕ್ತಿಯಿಂದ ವಿಶೇಷ ಗೌರವಕ್ಕೆ ಪಾತ್ರರಾಗುತ್ತೀರಿ. ಮಕ್ಕಳ ಯಶಸ್ಸಿಗೆ ಪ್ರೋತ್ಸಾಹ ನೀಡಲಿದ್ದೀರಿ. ಪ್ರೇಮಿಗಳ ಮಧ್ಯೆ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ವಿದೇಶಿ ವ್ಯವಹಾರಗಳಲ್ಲಿ ಏಳ್ಗೆ ಕಾಣಲಿದ್ದೀರಿ. ಸಾಲ ಮರುಪಾವತಿಗೆ ಸಂಬಂಧಿಸಿದಂತೆ ಸಮಸ್ಯೆಗಳು ಎದುರಾಗಬಹುದು. ಶುಭದಿನ: 10. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಜೀವನ ಮಟ್ಟ ಮೇಲಕ್ಕೆ ಏರಲಿದೆ. ಮನೆಗೆ ದುಬಾರಿ ವಿಲಾಸಿ ವಸ್ತುಗಳನ್ನು ಖರೀದಿಸುವ ಯೋಗ ಇದೆ. ದೈಹಿಕ ಕ್ಷಮತೆ ಹೆಚ್ಚಾಗಲಿದೆ. ದೈನಂದಿನ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ವೈವಾಹಿಕ ಜೀವನದ ಕಡೆಗೆ ಹೆಚ್ಚು ಲಕ್ಷ್ಯ ನೀಡಿ. ಸಂಗಾತಿಯ ಅಗತ್ಯಗಳಿಗೆ ಸ್ಪಂದಿಸಿ. ತುಂಬ ಸಂತೋಷದಿಂದ ಸಮಯ ಕಳೆಯಲಿದ್ದೀರಿ. ಶುಭದಿನ: 12. ಸೌಂದರ್ಯ ಲಹರಿ ಪಠಿಸಿರಿ.




ವ್ಯಾಪಾರದಲ್ಲಿ ನಿಮ್ಮ ಹಿಡಿತ ಗಟ್ಟಿಯಾಗಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಉದ್ಯೋಗ ವ್ಯಾಪಾರದಲ್ಲಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ದೂರ ಪ್ರಯಾಣಕ್ಕೆ ತೆರಳುವ ಯೋಗ ಇದೆ. ಕುಟುಂಬಕ್ಕೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲಿದ್ದೀರಿ. ಆರೋಗ್ಯ ಉತ್ತಮವಾಗಿರುತ್ತದೆ. ವಿರೋಧಿಗಳು ಕೆಲ ಸಮಸ್ಯೆಗಳನ್ನು ತಂದೊಡ್ಡಬಹುದು. ಶುಭದಿನ 14. ಲಕ್ಷ್ಮೀನರಸಿಂಹ ಜಪ ಮಾಡಿರಿ.




ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ. ವೃತ್ತಿ ಅಗತ್ಯಗಳಿಗೆ ಈ ಪ್ರಯಾಣ ಅನಿವಾರ್ಯ ಆಗಲಿದೆ. ನಿಮ್ಮ ಧೈರ್ಯ ಹೆಚ್ಚಾಗಲಿದೆ. ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಸ್ಪರ್ಧಾತ್ಮಕ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಇರುವವರಿಗೆ ಕನಸಿನ ಗುರಿ ಮುಟ್ಟಲು ಸೂಕ್ತ ಅವಕಾಶ ದೊರೆಯಲಿದೆ. ಆದರೆ ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ 10. ವಿಷ್ಣು ಸಹಸ್ರನಾಮ ಪಠಿಸಿರಿ.




ಆರೋಗ್ಯ ಸಮಸ್ಯೆಗಳು ಕಾಡುತ್ತಿದ್ದಲ್ಲಿ ನಿವಾರಣೆ ಆಗಲಿದೆ. ಉದ್ಯೋಗ ಹಾಗೂ ವ್ಯಾಪಾರದಲ್ಲಿ ಯಶಸ್ಸು ಪಡೆಯಲಿದ್ದೀರಿ. ಕೌಟುಂಬಿಕ ವಿಷಯಗಳಲ್ಲಿ ಮುಖ್ಯ ತೀರ್ಮಾನ ಮಾಡಲಿದ್ದೀರಿ. ಇತ್ತೀಚೆಗೆ ನೀವು ಅನುಭವಿಸಿದ ನಷ್ಟವನ್ನು ಮತ್ತೆ ಭರಿಸಲು ಎಲ್ಲ ಪ್ರಯತ್ನವನ್ನು ಮಾಡಲಿದ್ದೀರಿ. ಸಕಾರಾತ್ಮಕ ಫಲಿತಾಂಶಗಳು ದೊರೆಯಲಿವೆ. ಶುಭದಿನ 9. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಪೋಷಕರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಆಸ್ತಿ ವ್ಯವಹಾರದಲ್ಲಿ ಪ್ರಗತಿ ಕಾಣಲಿದೆ. ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಸಾಕಷ್ಟು ಅವಕಾಶಗಳು ದೊರೆಯಲಿವೆ. ಆದರೆ ಸ್ಥಿರವಾದ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಶುಭದಿನ 11. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಹಣಕಾಸು ಲಾಭ ಗಳಿಸುವ ಯೋಗ ಇದೆ. ನಿಮ್ಮ ಜ್ಞಾನ ಹಾಗೂ ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರಲಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಖರ್ಚಿನ ಪ್ರಮಾಣದಲ್ಲಿ ಹೆಚ್ಚಾಗಲಿದೆ. ವಾರಾಂತ್ಯಕ್ಕೆ ಬಿಡುವಿಲ್ಲದ ಕೆಲಸ ಇರುತ್ತದೆ. ಶುಭದಿನ 12. ಚಂಡಿ ಪಾರಾಯಣ ಮಾಡಿರಿ.




ಉದ್ಯೋಗ ಸ್ಥಳದಲ್ಲಿ ನಿಮಗೆ ಅನುಕೂಲಕರವಾಗಲಿದೆ. ಸಹೋದ್ಯೋಗಿಗಳ ಬೆಂಬಲ ನಿಮಗೆ ದೊರೆಯಲಿದೆ. ದೈಹಿಕ ಕ್ಷಮತೆ ಉತ್ತಮವಾಗಿರುತ್ತದೆ. ಸಮಾಜದಲ್ಲಿ ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಸಂಗಾತಿ ಮಕ್ಕಳ ಮೇಲೆ ನಿಮ್ಮ ಅಕ್ಕರಾಸ್ಥೆ ಹೆಚ್ಚಾಗಲಿದೆ. ಉದ್ಯಮಿಗಳಿಗೆ, ವ್ಯಾಪಾರಿಗಳಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ಶುಭದಿನ 14. ದತ್ತಗುರು ಚರಿತ್ರೆ ಪಠಿಸಿರಿ.




ಈ ಅವಧಿಯಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಇದೆ. ಅದೇ ರೀತಿ ಸರ್ಕಾರಿ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ಆರೋಗ್ಯ ಉತ್ತಮವಾಗಿರುತ್ತದೆ. ಅನುಭವಿಗಳ ಮಾರ್ಗದರ್ಶನದಿಂದ ಹೊಸ ಕೌಶಲ, ತಂತ್ರಗಳನ್ನು ಕಲಿಯಲು ಸಾಧ್ಯವಾಗುತ್ತದೆ. ಮಕ್ಕಳ ಪ್ರಗತಿಯಿಂದ ಮನಸಿಗೆ ಸಂತೋಷವಾಗುತ್ತದೆ. ಶುಭದಿನ 9. ಲಲಿತಾ ಸಹಸ್ರನಾಮ ಪಠಿಸಿರಿ.




ಹೂಡಿಕೆ ವಿದೇಶ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಕಾನೂನು ವ್ಯವಹಾರಗಳಲ್ಲಿ ನಿಮ್ಮ ಕೈ ಮೇಲಾಗಲಿದೆ. ಪ್ರತಿಸ್ಪರ್ಧಿಗಳು ನಿಮಗೆ ಸವಾಲೊಡ್ಡಬಹುದು. ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ದೊಡ್ಡ ಸಂಸ್ಥೆಗಳ ಜತೆಗೆ ವೃತ್ತಿಪರ ಒಪ್ಪಂದಕ್ಕೆ ಬರುವ ಅವಕಾಶಗಳು ಇವೆ. ಸಂಗಾತಿ ಹಾಗೂ ಮಕ್ಕಳ ಜತೆಗೆ ಸಂತೋಷವಾದ ಸಮಯ ಕಳೆಯಲಿದ್ದೀರಿ. ಶುಭದಿನ 15. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಂಗಾತಿ ಜತೆಗೆ ಸಂಬಂಧ ಗಾಢವಾಗಲಿದೆ. ಕೌಟುಂಬಿಕ ಜೀವನದಲ್ಲಿ ಕೊಟ್ಟ ಮಾತಿನಂತೆ ನಡೆದುಕೊಳ್ಳಲಿದ್ದೀರಿ. ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಸಂಸ್ಥೆಗಳಲ್ಲಿ ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಹಿಡಿತ ಗಟ್ಟಿ ಮಾಡಿಕೊಳ್ಳಲು ಅವಕಾಶ ದೊರೆಯಲಿದೆ. ಆರೋಗ್ಯದಲ್ಲಿ ಏರಿಳಿತ ಇರಲಿದೆ. ಸಕಾರಾತ್ಮಕ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ 10. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.




ಸೋದರ ಸಂಬಂಧಿಗಳ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ವೃತ್ತಿಪರ ಕಾರಣಗಳಿಗಾಗಿ ದೀರ್ಘ ಪ್ರಯಾಣಗಳನ್ನು ಮಾಡಬೇಕಾಗುತ್ತದೆ. ಸ್ಥಿರವಾದ ಆರೋಗ್ಯ ಹಾಗೂ ದೃಢತೆ ಕಾಯ್ದುಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕ್ರಿಯೇಟಿವ್ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರಗತಿ ಇದೆ. ಶುಭದಿನ 12. ಶಿವಕವಚ ಪಠಿಸಿರಿ.